ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಕಂದಾಯ ನಿವೇಶನಗಳ ನೋಂದಣಿ ಬಗ್ಗೆ

ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

260 (387) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಂದಾಯ ನಿವೇಶನ ಎಂದರೇನು ; ಕಾನೂನಿನಲ್ಲಿ ಇವುಗಳ ಮಾನ್ಯತೆ ಏನು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಂದಾಯ ನಿವೇಶನಗಳ ನೋಂದಣಿಯನ್ನು ಸ್ಥಗಿತಗೊಳಿಸಿರುವುದು ನಿಜವೇ ; ಆಗಿದ್ದರೆ, ಸ್ಥಗಿತಗೊಳಿಸಲು ಕಾರಣಗಳೇನು ; ಇದರಿಂದ ಸಾವಿರಾರು ಜನಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಸ್ಥಗಿತಗೊಳಿಸಿರುವ ಕಂದಾಯ ನಿವೇಶನಗಳ ನೋಂದಣಿಯನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು ;

(ಈ) ಕಂದಾಯ ನಿವೇಶನಗಳನ್ನು ನೋಂದಣಿ ಮಾಡಿಸಲು ಇರುವ ಮಾರ್ಗಸೂಚಿ ಹಾಗೂ ಷರತ್ತುಗಳೇನು ?